ಶ್ರೀ ಸೋಮೇಶ್ವರಸ್ವಾಮಿ ದೇವಸ್ಥಾನ

2023(2170); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಮಾಗಡಿ ಪಟ್ಟಣಗಳಲ್ಲಿರುವ ಸೋಮೇಶ್ವರಸ್ವಾಮಿ ದೇವಸ್ಥಾನದ ಹಿಂದೆ ಇರುವ ಗೋಪುರವು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಗೋಪುರವನ್ನು ದುರಸ್ಥಿಗೊಳಿಸಲಾಗುವುದು ಹಾಗು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಸಣ್ಣ ಕೈಗಾರಿಕೆ, ಸಕ್ಕರೆ ಮತ್ತು ಮುಜರಾಯಿ ಸಚಿವರು)

ಅ) ಹೌದು.

ಮಾಗಡಿ ತಾಲ್ಲೂಕು, ಮಾಗಡಿ ಪಟ್ಟಣದಲ್ಲಿರುವ ಶ್ರೀ ಸೋಮೇಶ್ವರಸ್ವಾಮಿ ದೇವಾಲಯವು ಧಾರ್ಮಿಕ ದತ್ತಿ ಇಲಾಖೆಯ ಸಮೂಹ 'ಸಿ' ಪ್ರವರ್ಗದ ಅಧಿಸೂಚಿತ ದೇವಾಲಯವಾಗಿದ್ದು ರಾಜ್ಯ ಪ್ರಾಚ್ಯವಸ್ತು ಇಲಾಖೆಯ ಸಂರಕ್ಷಿತ ಸಂಸ್ಥೆಯಾಗಿರುತ್ತದೆ.

ಶ್ರೀ ದೇವಾಲಯದ ಹಿಂಭಾಗದಲ್ಲಿ ಅಂದರೆ ದೇವಾಲಯದ ಸುಮಾರು 100 ಮೀಟರ್ ದೂರದಲ್ಲಿ ಕಲ್ಲು ಬಂಡೆಯ ಮೇಲೆ ಸುಮಾರು 20 ಅಡಿ ಎತ್ತರವಿರುವ ಬಸವಣ್ಣ ಪ್ರತಿಮೆಯ ಗೋಪುರವಿದ್ದು, ಸದರಿ ಗೋಪುರದ ತಳಭಾಗವು ಕಲ್ಲಿನಿಂದ ಮಾಡಲಾಗಿದ್ದು, ಭೌತಿಕವಾಗಿ ಸುಸ್ಥಿತಿಯಲ್ಲಿದ್ದು, ಗೋಪುರದ ಮೇಲ್ಭಾಗದ ಸುಮಾರು 8 ರಿಂದ 9 ಅಡಿ ಗೋಪುರವು ಶಿಥಿಲವಾಗಿರುವುದಾಗಿ ಜಿಲ್ಲಾಧಿಕಾರಿಗಳು ವರದಿ ಮಾಡಿರುತ್ತಾರೆ.

ಆ) ಈ ದೇವಾಲಯವು ರಾಜ್ಯ ಪ್ರಾಚ್ಯವಸ್ತು ಇಲಾಖೆಯ ಸಂರಕ್ಷಿತ ಸ್ಮಾರಕವಾಗಿರುವುದರಿಂದ ಗೋಪುರ ದುರಸ್ಥಿ ಕಾರ್ಯವನ್ನು ಪ್ರಾಚ್ಯವಸ್ತು ಇಲಾಖೆಯ ವತಿಯಿಂದ ನಿರ್ವಹಿಸಬೇಕಾಗಿರುತ್ತದೆ.

ಸಾಮಾನ್ಯ ಯೋಜನೆಯಡಿ, ಅನುಪಯುಕ್ತ ಅನುದಾನದಿಂದ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ₹ 25.00 ಲಕ್ಷಗಳ ಅನುದಾನವನ್ನು ಮುಜರಾಯಿ ಮತ್ತು ಮುಜರಾಯೇತರ ದೇವಾಲಯಗಳ ಅಭಿವೃದ್ಧಿ/ಜೀರ್ಣೋದ್ಧಾರಕ್ಕಾಗಿ ಬಿಡುಗಡೆ ಮಾಡಿದ್ದು, ಮಾನ್ಯ ಶಾಸಕರು ಆದ್ಯತೆ ಮೇರೆಗೆ ಪರಿಶೀಲಿಸಿ ಈ ದೇವಾಲಯಕ್ಕೆ ಅನುದಾನ ಬಿಡುಗಡೆ ಮಾಡಲು ಜಿಲ್ಲಾಧಿಕಾರಿಗಳಿಗೆ ಸೂಚಿಸಿ ಅಭಿವೃದ್ಧಿ ಕಾಮಗಾರಿಯನ್ನು ರಾಜ್ಯ ಪ್ರಾಚ್ಯವಸ್ತು ಇಲಾಖೆಯವರ ಸಹಮತಿ/ಅನುಮತಿಯೊಂದಿಗೆ ಕೈಗೊಳ್ಳಬಹುದಾಗಿದೆ.

ಐ.ಟಿ.ಐ ಕಾಲೇಜುಗಳ ಮಂಜೂರಾತಿ

2024(2171); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಐಟಿಐ ಕಾಲೇಜುಗಳ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಯಾವ್ಯಾವ ಸ್ಥಳಗಳಲ್ಲಿ ಅವಶ್ಯಕತೆಗಳಿಗೆ; ಈಗಾಗಲೆ ಯಾವ್ಯಾವ ಸ್ಥಳಗಳಿಗೆ ಐಟಿಐ ಕಾಲೇಜುಗಳನ್ನು ಮಂಜೂರು ಮಾಡಲಾಗಿದೆ; ಯಾವ್ಯಾವ ವರ್ಷಗಳಲ್ಲಿ ಮಂಜೂರು ಮಾಡಲಾಗಿದೆ;

ಇ) ಬೇಡಿಕೆ ಇರುವ ಸ್ಥಳಗಳಿಗೆ ಯಾವ ಕಾಲಮಿತಿಯಲ್ಲಿ ಐ.ಟಿ.ಐ. ಕಾಲೇಜುಗಳನ್ನು ಮಂಜೂರು ಮಾಡಲಾಗುವುದು?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕರ್ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಹೌದು.

Yes.